# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ್ಣ (ಬೆಂಗಳೂರು ಶಿಕ್ಷಕರ ಕ್ಷೇತ್ರ) ಇವರು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಲಿರುವ ಕುರಿತು:**

**ವಿಷಯ**: ರಾಜ್ಯದಲ್ಲಿ ಇತ್ತೀಚಿಗೆ ಪತ್ರಿಕೆಗಳು ದೃಶ್ಯ ಮಾಧ್ಯಮಗಳು ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಗ್ರಾಮೀಣ ಪ್ರದೇಶದಲ್ಲಿ ವ್ಯವಸಾಯ ಮಾಡುವ ರೈತರು, ರೈತರ ಮಕ್ಕಳು ಹಾಗೂ ಕೂಲಿ ಕಾರ್ಮಿಕರಿಗೆ ಮದುವೆಯಾಗಲು ಹೆಣ್ಣು ಮಕ್ಕಳು ಸಿಗುತ್ತಿಲ್ಲ. ಈ ಬಗ್ಗೆ ಹಲವಾರು ಜಿಲ್ಲೆಗಳಲ್ಲಿ ಸಾವಿರಾರು ಯುವಕರು ವಿವಾಹವಾಗುವ ವಯಸ್ಸು ಮೀರುತ್ತಿದ್ದು, ಮದುವೆಯಾಗುವುದಕ್ಕಾಗಿ ಬಹಳ ಕಷ್ಟಪಡುತ್ತಿದ್ದಾರೆ. ಈ ಬಗ್ಗೆ ಹೆಣ್ಣು ಸಿಗದ ವ್ಯವಸಾಯ ಮಾಡುವ ಗ್ರಾಮೀಣ ಪ್ರದೇಶದ ಗಂಡು ಮಕ್ಕಳು ನಮಗೆ ತಾಲ್ಲೂಕಿಗೆ ಒಂದು ಮಠಗಳನ್ನು ಕಟ್ಟಿಕೊಡಿ ಎಂದು ಪತ್ರಿಕೆಗಳು ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಸರ್ಕಾರಕ್ಕೆ ಮನವಿ ಹಾಗೂ ಒತ್ತಾಯ ಮಾಡುತ್ತಿದ್ದಾರೆ. ಅಲ್ಲದೆ ಈ ಯುವಕರು ಮಲೈಮಹದೇಶ್ವರ ದೇವಸ್ಥಾನ, ಧರ್ಮಸ್ಥಳ ಹಾಗೂ ಇನ್ನಿತರೆ ಪವಿತ್ರ ದೇವಸ್ಥಾನಗಳಿಗೆ ಪಾದಯಾತ್ರೆ ಮುಖಾಂತರ ಹೋಗಿ ಹರಕೆ, ಪೂಜೆ ಪುನಸ್ಕಾರ ಹಾಗೂ ತೀರ್ಥ ಯಾತ್ರೆಯನ್ನು ಕೈಗೊಳ್ಳುತ್ತಿದ್ದಾರೆ. ಹಿಂದೆ ರೈತರು , ರೈತರ ಮಕ್ಕಳು ಸೇರಿದಂತೆ ಎಲ್ಲರಿಗೂ ಮದುವೆಯಾಗಲು ಹೆಣ್ಣು ಮಕ್ಕಳ ಕೊರತೆ ಇರಲಿಲ್ಲ. ಹುಡುಗಿಯರು ಮದುವೆಯಾಗಲು ಗಂಡು ಮಕ್ಕಳು ಸಿಕ್ಕಿದರೆ ಸಾಕು ಎನ್ನುವ ಕಾಲವೊಂದಿತ್ತು. ಆದರೆ ಈಗ ಕಾಲ ಬದಲಾಗಿರುವುದರಿಂದ ಯುವಕರಿಗೆ ಹುಡುಗಿಯರು ಸಿಗದಂತಹ ಪರಿಸ್ಥಿತಿ ಉಂಟಾಗಿದ್ದು, ಹಲವಾರು ರೈತರು ಕೃಷಿ ಕಾರ್ಮಿಕರು, ಕೂಲಿ ಕಾರ್ಮಿಕರು ಸೇರಿದಂತೆ ಲಕ್ಷಾಂತರ ಗಂಡು ಮಕ್ಕಳಿಗೆ ಹೆಣ್ಣು ಸಿಗದಂತಾಗಿದ್ದು, ಹೆಣ್ಣು ಮಕ್ಕಳು ಇರುವಂತಹ ತಂದೆ ತಾಯಂದಿರು ಕೂಡ ಉದ್ಯೋಗಸ್ಥರು ಅಥವಾ ಉದ್ದಿಮೆದಾರರನ್ನು ಹುಡುಕಿ ಮದುವೆ ಮಾಡುತ್ತಿದ್ದಾರೆ. ಈ ಕಾರಣದಿಂದ ಇದೊಂದು ಸಮಾಜದಲ್ಲಿ ಸಮಾಜದ ಸ್ವಾಸ್ತ್ಯವನ್ನು ಕೆಡಿಸುವಂತಹ ಸ್ಥಿತಿ ನಿರ್ಮಾಣವಾಗುತ್ತಿದೆ. ಆದಕಾರಣ ಸರ್ಕಾರ ಕೂಡಲೇ ಈ ರೈತಾಪಿ ಕೃಷಿ ಕಾರ್ಮಿಕರ ಕೂಲಿ ಕಾರ್ಮಿಕರ ನೆರವಿಗೆ ಬರಬೇಕಾಗಿದೆ. ಸರ್ಕಾರ ಮದುವೆ ಆಗದ ಗ್ರಾಮೀಣ ಭಾಗದ ಕೃಷಿ ಮಾಡುವಂತಹ ಯುವಕರಿಗಾಗಿ ಒಂದು ಯೋಜನೆಯನ್ನು ರೂಪಿಸಿ, ಇವರನ್ನು ಮದುವೆಯಾಗುವ ಹೆಣ್ಣುಮಕ್ಕಳಿಗೆ ಪ್ರೋತ್ಸಾಹಿಸುವ ದೃಷ್ಟಿಯಿಂದ ಕನಿಷ್ಠ ಹತ್ತು ಲಕ್ಷ ಹಣವನ್ನು ಆಕೆಯ ಹೆಸರಿಗೆ ಬ್ಯಾಂಕ್ ನಲ್ಲಿ ಠೇವಣಿ ಇಡುವುದರ ಮುಖಾಂತರ ಗ್ರಾಮೀಣ ಪ್ರದೇಶದ ರೈತರ ಮಕ್ಕಳು ಕೃಷಿ ಹಾಗೂ ಕೂಲಿ ಕಾರ್ಮಿಕರ ನೆರವಿಗೆ ಬರಬೇಕೆಂದು ಸನ್ಮಾನ್ಯ ಮುಖ್ಯಮಂತ್ರಿಗಳಲ್ಲಿ ಶೂನ್ಯವೇಳೆಯಲ್ಲಿ ಒತ್ತಾಯಿಸುತ್ತೇನೆ.

**ಉತ್ತರ:** ಕೃಷಿ ಇಲಾಖೆಯಿಂದ ಗ್ರಾಮೀಣ ಭಾಗದ ಯುವಕರಿಗಾಗಿ ಪ್ರತ್ಯೇಕ ಯೋಜನೆ/ಕಾರ್ಯಕ್ರಮಗಳನ್ನು ರೂಪಿಸಿರುವುದಿಲ್ಲ. ಆದಾಗ್ಯೂ ಕೃಷಿಕರ ಅಭಿವೃದ್ಧಿಗಾಗಿ ಕೃಷಿ ಇಲಾಖೆಯಿಂದ ವಿವಿಧ ಯೋಜನೆ/ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿದ್ದು ಕೃಷಿಯಲ್ಲಿ ತೊಡಗಿರುವ ಗ್ರಾಮೀಣ ಭಾಗದ ಯುವಕರುಗಳು ಸದರಿ ಯೋಜನೆ/ಕಾರ್ಯಕ್ರಮಗಳ ಸೌಲಭ್ಯಗಳನ್ನು ಪಡೆಯಬಹುದಾಗಿರುತ್ತದೆ. ಕೃಷಿ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರಗಳನ್ನು ಅನುಬಂಧದಲ್ಲಿ ಲಗತ್ತಿಸಿದೆ.

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು

ಸಂಖ್ಯೆ: AGRI/304/AML/2025

## ಅನುಬಂಧ

## ಕೃಷಿ ಇಲಾಖೆಯ ವತಿಯಿಂದ ವಿವಿಧ ಯೋಜನೆಗಳಡಿ ರೈತರಿಗೆ ದೊರೆಯುವ ಸೌಲಭ್ಯಗಳು

1. **ಬೀಜಗಳ ಪೂರೈಕೆ:** ಕೃಷಿ ಇಲಾಖೆಯ ಬೀಜಗಳ ಪೂರೈಕೆ ಯೋಜನೆಯಡಿ ರಾಜ್ಯದ ಎಲ್ಲಾ ವರ್ಗದ ರೈತರಿಗೆ ವಿವಿಧ ಕೃಷಿ ಬೆಳೆಗಳ (ಭತ್ತ, ರಾಗಿ, ಜೋಳ, ಮುಸುಕಿನ ಜೋಳ, ಸಜ್ಜೆ, ತೊಗರಿ, ಕಡಲೆ, ಹೆಸರು, ಉದ್ದು, ಅಲಸಂದೆ, ನೆಲಗಡಲೆ, ಸೂರ್ಯಕಾಂತಿ, ಸೋಯಾ ಅವರೆ, ಹತ್ತಿ ಇತ್ಯಾದಿ) ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ. 50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರ ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ. ಒಟ್ಟಾರೆ ಗರಿಷ್ಟ 2.00 ಹೆಕ್ಟೇರ್ ಅಥವಾ ಅವರ ವಾಸ್ತವಿಕ ಹಿಡುವಳಿ ಯಾವುದು ಕಡಿಮೆಯೋ ಆ ವಿಸ್ತೀರ್ಣಕ್ಕೆ ಮಾತ್ರ ರಿಯಾಯಿತಿಯಲ್ಲಿ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದೆ.
2. **ಸಸ್ಯ ಸಂರಕ್ಷಣೆ:** ಶೇ.50ರ ಸಹಾಯಧನದಡಿ ಪ್ರತಿ ಹೆಕ್ಟೇರಿಗೆ ರೂ. 500/- ಮೀರದಂತೆ ಪ್ರತಿ ರೈತರಿಗೆ ಪ್ರತಿ ಹಂಗಾಮಿಗೆ ಗರಿಷ್ಟ 2 ಹೆಕ್ಟೇರಿಗೆ ಸೀಮಿತಗೊಳಿಸಿ ಪೀಡೆನಾಶಕ/ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಕಾರಕಗಳ ವಿತರಣೆ, ಬೀಜೋಪಚಾರ ಆಂದೋಲನ ಹಾಗೂ ಸುರಕ್ಷಿತ ಕೀಟನಾಶಕಗಳ ಬಳಕೆ ಬಗ್ಗೆ ತರಬೇತಿಗಾಗಿ ಅನುದಾನವನ್ನು ಬಳಸಿಕೊಳ್ಳಲಾಗುತ್ತಿದೆ.
3. **ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM), ರಾಜ್ಯ ವಲಯ ಕೃಷಿ ಯಾಂತ್ರೀಕರಣ & ಕೃಷಿ ಸಂಸ್ಕರಣೆ:**

   ***ಕೃಷಿ ಯಾಂತ್ರೀಕರಣ:*** ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳುವುದಕ್ಕೆ ಅನುವು ಮಾಡಿಕೊಡಲು ಹಾಗೂ, ಈ ಯೋಜನೆಯಡಿ ಕೃಷಿ ಯಂತ್ರೋಪಕರಣಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತದೆ ಹಾಗೂ 45 ಪಿ.ಟಿ.ಒ ಹೆಚ್.ಪಿ ವರೆಗಿನ ಟ್ರಾಕ್ಟರ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ.0.75 ಲಕ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರ ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತದೆ.

   ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು, ಕೂಲಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಿ, ಅವರ ಸಮಸ್ಯೆಯನ್ನು ನೀಗಿಸಲು, ಹೆಚ್ಚಿನ ಇಳುವರಿ ಪಡೆಯಲು ನೆರವಾಗುವಂತೆ ಸಹಕಾರಿಯಾಗಲು ಹಾಗೂ ಕ್ಷೇತ್ರ ಶಕ್ತಿಯನ್ನು (ಪ್ರಸ್ತುತವಿರುವ 2.115 KW/ Ha to 2.5kW/Ha by 2023 and 4.00kW/ha by 2030) ಹೆಚ್ಚಿಸಲು ಕೃಷಿ ಯಾಂತ್ರೀಕರಣ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ. ರೈತರಿಗೆ ಟ್ರ್ಯಾಕ್ಟರ್ (45HP ವರೆಗೆ), ಪವರ್ ಟಿಲ್ಲರ್ಗಳ ಜೊತೆಗೆ ಭೂಮಿ ಸಿದ್ಧತೆ ಉಪಕರಣಗಳು, ಬಿತ್ತನೆ/ನಾಟಿ ಮಾಡುವ ಉಪಕರಣಗಳು, ಶಕ್ತಿ ಚಾಲಿತ ಸಸ್ಯ ಸಂರಕ್ಷಣಾ ಉಪಕರಣಗಳು, ಶಕ್ತಿ ಚಾಲಿತ ಅಂತರ ಬೇಸಾಯ ಉಪಕರಣಗಳು, ಕೊಯ್ಲು ಮತ್ತು ಸಂಸ್ಕರಣಾ ಉಪಕರಣಗಳು, ತ್ಯಾಜ್ಯ ವಸ್ತುಗಳ ನಿರ್ವಹಣಾ ಉಪಕರಣಗಳು, ಅಂತರ ಬೇಸಾಯ ಉಪಕರಣಗಳು, ಡೀಸೆಲ್ ಪಂಪ್‌ಸೆಟ್ ಗಳು ಇತ್ಯಾದಿ ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ಒದಗಿಸಲಾಗುತ್ತಿದೆ. ಹೀಗೆ ಉಳುಮೆಯಿಂದ ಕೊಯ್ಲಿನವರೆಗೆ ಹಾಗೂ ಕೊಯ್ಲು ನಂತರ ಉಪಯುಕ್ತವಾಗುವ ವಿವಿಧ ನಮೂನೆಯ ಕೃಷಿ ಉಪಕರಣಗಳನ್ನು ಸಹಾಯಧನದಡಿ ರೈತರಿಗೆ ಒದಗಿಸಲಾಗುತ್ತದೆ.

   ***ಕೃಷಿ ಸಂಸ್ಕರಣೆ:*** ಈ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು, ಟಾರ್ಪಾಲಿನ್ ಮತ್ತು ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಹಾಯಧನದಡಿ ರೈತರಿಗೆ ವಿತರಿಸಲಾಗುತ್ತಿದೆ. ಸದರಿ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು ಮತ್ತು ಟಾರ್ಪಾಲಿನ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರಷ್ಟು ಸಹಾಯಧನ ನೀಡಲಾಗುತ್ತಿದೆ. ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.75 ಹಾಗೂ ಪ.ಜಾ./ಪ.ಪಂ., ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತದೆ.
4. **ಹೈಟೆಕ್ ಹಾರ್ವೆಸ್ಟರ್ ಹಬ್-** ಬೆಳೆ ಕಟಾವು ಪ್ರಕ್ರಿಯೆಯನ್ನು ನಿಗದಿತ ಸಮಯದಲ್ಲಿ ಕೈಗೊಳ್ಳಲು ಹಾಗೂ ಕಟಾವು ಸಮಯದಲ್ಲಿ ಬೆಳೆ ನಷ್ಟವನ್ನು ತಡೆಗಟ್ಟಲು ಹೈಟೆಕ್ ಹಾರ್ವೆಸ್ಟರ್ ಹಬ್‌ಗಳನ್ನು ಹಂತ ಹಂತವಾಗಿ ಸ್ಥಾಪಿಸಲು ರಾಜ್ಯದಲ್ಲಿ ಪ್ರಚಲಿತವಿರುವ ಕೃಷಿ ಯಂತ್ರಧಾರೆ ಕೇಂದ್ರಗಳು/ರೈತ ಉತ್ಪಾದಕ ಸಂಸ್ಥೆಗಳು/ ಸೇವಾದಾರ ಸಂಸ್ಥೆಗಳು/ ವೈಯಕ್ತಿಕ ಫಲಾನುಭವಿಗಳನ್ನು ಒಳಗೊಂಡಂತೆ ಆಯ್ಕೆ ಮಾಡಿದ ಅರ್ಹತೆಯಿರುವ ಸಂಸ್ಥೆಗಳಿಗೆ / ವೈಯಕ್ತಿಕ ಫಲಾನುಭವಿಗಳಿಗೆ Hi-Tech Harvester Hubs ಗಳಿಗೆ ಸಹಾಯಧನವನ್ನು Credit Linked Back Ended ರೂಪದಲ್ಲಿ ಒದಗಿಸಲಾಗುತ್ತಿದೆ. ಸದರಿ ಕೇಂದ್ರಗಳಲ್ಲಿ ದಾಸ್ತಾನೀಕರಿಸುವ Hi-Tech ಕಟಾವು / ಒಕ್ಕಣೆ ಯಂತ್ರಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ರಂತೆ ಗರಿಷ್ಠ ರೂ.40.00 ಲಕ್ಷದವರೆಗೆ, ಪ.ಜ/ಪ.ಪಂ. ವರ್ಗದ ರೈತರಿಗೆ ಹಾಗೂ ಸಂಘ-ಸಂಸ್ಥೆಗಳಿಗೆ (ಚಾಲ್ತಿಯಲ್ಲಿರುವ ಕೃಷಿ ಯಂತ್ರಧಾರೆ ಕೇಂದ್ರಗಳ ಸೇವಾದಾರ ಸಂಸ್ಥೆ/FPO ಗಳನ್ನೊಳಗೊಂಡಂತೆ) ಶೇ.70 ರಂತೆ ಗರಿಷ್ಠ ರೂ.50.00 ಲಕ್ಷದವರೆಗೆ ಸಹಾಯಧನವನ್ನು Credit Linked Back Ended ರೂಪದಲ್ಲಿ ಒದಗಿಸಲಾಗುತ್ತಿದೆ. ಪ್ರತಿ ಒಂದು ಹೈಟೆಕ್ ಹಾರ್ವೆಸ್ಟರ್ ಹಬ್ ಘಟಕಕ್ಕೆ ಗರಿಷ್ಠ ಮೊತ್ತ ರೂ.100.00 ಲಕ್ಷಗಳು ಮೀರದಂತೆ (ರೂ.5.00 ಲಕ್ಷಗಳ ಆಡಳಿತಾತ್ಮಕ ವೆಚ್ಚ

ಒಳಗೊಂಡಂತೆ) ಸಹಾಯಧನವನ್ನು ಒದಗಿಸಲಾಗುತ್ತಿದೆ. ಸದರಿ ಯಂತ್ರೋಪಕರಣಗಳನ್ನು ಬಾಡಿಗೆ ಆಧಾರದ ಮೇಲೆ ರೈತರಿಗೆ ಒದಗಿಸಲಾಗುತ್ತದೆ.

5. **ಸೂಕ್ಷ್ಮ ನೀರಾವರಿ ಯೋಜನೆ:** ಈ ಕಾರ್ಯಕ್ರಮವನ್ನು ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಅನುಷ್ಠಾನ ಮಾಡಲಾಗುತ್ತಿದೆ. ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಸಣ್ಣ / ಅತಿ ಸಣ್ಣ ರೈತರಿಗೆ ಶೇ.55 ಮತ್ತು ಇತರೇ ವರ್ಗದ ರೈತರಿಗೆ ಶೇ.45 ರಷ್ಟು ಸಹಾಯಧನವನ್ನು ಪ್ರತಿಯೊಬ್ಬ ರೈತರಿಗೆ ಹಿಡುವಳಿಗನುಸಾರ ಗರಿಷ್ಠ 5.0 ಹೆಕ್ಟೇರ್ ಪ್ರದೇಶದವರೆಗೆ ನೀಡಲು ಅವಕಾಶವಿರುತ್ತದೆ. ಇದರಲ್ಲಿ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು 60:40 ಇದ್ದು, ರಾಜ್ಯದಲ್ಲಿ ರಾಜ್ಯ ಸರ್ಕಾರದ ವತಿಯಿಂದ ರಾಜ್ಯದ ಪಾಲಿನ ಶೇ.35-45 ರಷ್ಟು ಹೆಚ್ಚುವರಿ ಸಹಾಯಧನವನ್ನು ಸೇರಿಸಿ ಒಟ್ಟಾರೆ ಶೇ.90ರ ಸಹಾಯಧನದಲ್ಲಿ ಸೂಕ್ಷ್ಮ ನೀರಾವರಿ ಚಟುವಟಿಕೆಗಳನ್ನು ಅನುಷ್ಠಾನ ಮಾಡಲಾಗುತ್ತಿದೆ.
   - ಎಲ್ಲಾ ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ತುಂತುರು ನೀರಾವರಿಗೆ ಶೇ.90 ರ ಸಹಾಯಧನ ನೀಡಲಾಗುತ್ತಿದೆ.
   - ಸಣ್ಣ / ಅತಿ ಸಣ್ಣ / ಪ.ಜಾ / ಪ.ಪಂ. ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಹನಿ ನೀರಾವರಿ ಅಳವಡಿಕೆಗೆ ಶೇ.90 ರ ಸಹಾಯಧನ ನೀಡಲಾಗುತ್ತಿದೆ.
   - ಉಳಿದ ಎಲ್ಲಾ ರೈತರ ವರ್ಗಕ್ಕೆ 5.0 ಹೆಕ್ಟೇರ್ ಪ್ರದೇಶದವರೆಗೆ ಶೇ.45 ರ ಸಹಾಯಧನ ನೀಡಲಾಗುತ್ತಿದೆ.
6. **ರೈತ ಸಿರಿ:** ರೈತ ಸಿರಿ ಕಾರ್ಯಕ್ರಮದಡಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು, ಬರಗು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಬೆಳೆ ಸಮೀಕ್ಷೆ ಆಧಾರದ ಮೇರೆಗೆ ಪ್ರೋತ್ಸಾಹಧನವನ್ನು ನೇರ ನಗದುವರ್ಗಾವಣೆ ಮೂಲಕ ನೀಡಲಾಗುತ್ತಿದೆ.
7. **ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮ:** ಕಣ್ಮರೆಯಾಗುತ್ತಿರುವ ಮತ್ತು ಆಯಾ ಸ್ಥಳೀಯ ಪ್ರದೇಶಕ್ಕೆ ಸೂಕ್ತವಾದ ದೇಸಿ ತಳಿಗಳ ಬೀಜಗಳನ್ನು ಸಂರಕ್ಷಿಸುವ ಮುಖ್ಯ ಉದ್ದೇಶದೊಂದಿಗೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ
8. **ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ (NMNF):** ನೈಸರ್ಗಿಕ ಕೃಷಿ ಪದ್ಧತಿಗಳನ್ನು ಉತ್ತೇಜಿಸುವ ನಿಟ್ಟಿನಲ್ಲಿ ಸದರಿ ಕೇಂದ್ರ ಪುರಸ್ಕೃತ ಯೋಜನೆಯನ್ನು ರಾಜ್ಯದ 990 ಗುಚ್ಛಗಳ 49500 ಹೆ. ಪ್ರದೇಶದಲ್ಲಿ 123750 ರೈತರನ್ನು ನೈಸರ್ಗಿಕ ಕೃಷಿಗೆ ಒಳಪಡಿಸುವ ಗುರಿಯೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ.
9. **ಸಾವಯವ ಇಂಗಾಲ ಅಭಿಯಾನ:** ರಾಜ್ಯದ ಕೃಷಿ ಭೂಮಿಯಲ್ಲಿ ಸಾವಯವ ಇಂಗಾಲದ ಪ್ರಮಾಣವನ್ನು ಹೆಚ್ಚಿಸಲು, ದ್ವಿದಳಧಾನ್ಯಗಳ ವಿಸ್ತೀರ್ಣ ಮತ್ತು ಉತ್ಪಾದನೆ ಹೆಚ್ಚಿಸುವ ಸಲುವಾಗಿ ಶೇ. 75ರ ರಿಯಾಯಿತಿ ದರದಲ್ಲಿ ಹಸಿರೆಲೆ ಗೊಬ್ಬರ ಬಿತ್ತನೆ ಬೀಜಗಳ ವಿತರಣೆ ಮಾಡಲಾಗುತ್ತಿದೆ ಹಾಗೂ ಹಸಿರೆಲೆ ಗೊಬ್ಬರ ಬೀಜ ಮತ್ತು ಸಾವಯವ ಗೊಬ್ಬರಗಳ ಬಳಕೆಯಿಂದ ಸಾವಯವ ಇಂಗಾಲ ಹೆಚ್ಚಿಸುವ ಕುರಿತು ಪ್ರಾತ್ಯಕ್ಷಿಕೆಗಳನ್ನು (ಪ್ರತಿ ಪ್ರಾತ್ಯಕ್ಷಿಕೆಗೆ ರೂ. 2500/-) ಆಯೋಜಿಸಲಾಗುತ್ತಿದೆ.
10. **ಹೊಸ ಬೆಳೆ ವಿಮಾ-ಯೋಜನೆ:** ಈ ಯೋಜನೆಯಡಿ ಪ್ರಕೃತಿ ವಿಕೋಪಗಳು, ಕೀಟಗಳು ಮತ್ತು ರೋಗಗಳಿಂದಾಗಿ ಯಾವುದೇ ಅಧಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಹಣಕಾಸು ಬೆಂಬಲ ನೀಡಲಾಗುವುದು. ರೈತರಿಗೆ ನೀಡುವ ವಿಮಾ ಕಂತಿನ ರಿಯಾಯಿತಿಯಲ್ಲಿ ರಾಜ್ಯ ಸರ್ಕಾರದ ಪಾಲನ್ನು ನೀಡಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಅನುವು ಮಾಡಲಾಗುತ್ತದೆ.

    ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿ ಪ್ರಕಾರ 2016-17ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯು ಕ್ಷೇತ್ರಾಧಾರಿತ ಮತ್ತು ಇಳುವರಿ ಆಧಾರಿತ ಯೋಜನೆಯಾಗಿರುತ್ತದೆ. ಈ ಯೋಜನೆಯಡಿ ತಾಲ್ಲೂಕುವಾರು ಕೆಲವು ಮುಖ್ಯ ಬೆಳೆಗಳನ್ನು ಗ್ರಾಮ ಪಂಚಾಯತಿ ಮಟ್ಟಕ್ಕೆ ಹಾಗೂ ಇತರ ಬೆಳೆಗಳನ್ನು ಹೋಬಳಿ ಮಟ್ಟಕ್ಕೆ ಅಧಿಸೂಚಿಸಲಾಗುವುದು. ಮಾರ್ಗಸೂಚಿಯನುಸಾರ ಹೋಬಳಿ/ಗ್ರಾಮ ಪಂಚಾಯತಿ ಮಟ್ಟದಲ್ಲಿ ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯವರು ನೀಡುವ ಬೆಳೆ ಕಟಾವು ಪ್ರಯೋಗಗಳಿಂದ ಬಂದಂತಹ ವಾಸ್ತವಿಕ ಇಳುವರಿಯು ನಿಗದಿಪಡಿಸಲಾದ ಪ್ರಾರಂಭಿಕ ಇಳುವರಿಗಿಂತ ಕಡಿಮೆ ಇದ್ದರೆ, ಇಳುವರಿಯ ಕೊರತೆಗನುಗುಣವಾಗಿ ಹೋಬಳಿ/ಗ್ರಾಮ ಪಂಚಾಯತಿ ವಿಮಾ ಘಟಕದಲ್ಲಿ ಬೆಳೆ ವಿಮೆ ಮಾಡಿದ ಎಲ್ಲಾ ರೈತರು ಬೆಳೆ ವಿಮಾ ನಷ್ಟ ಪಡೆಯಲು ಅರ್ಹರಾಗುತ್ತಾರೆ.
11. **ಬೆಳೆ ಸಮೀಕ್ಷೆ:** ಡಿ.ಪಿ.ಎ.ಆರ್ ಇಲಾಖೆ ವತಿಯಿಂದ ಅಭಿವೃದ್ಧಿಪಡಿಸಿರುವ GPS ಆಧಾರಿತ ಮೊಬೈಲ್ ಅಪ್ಲಿಕೇಷನ್ ಬಳಸಿ ರಾಜ್ಯದ ಎಲ್ಲಾ ರೈತರ ತಾಕುಗಳಲ್ಲಿ ವರ್ಷದ ನಾಲ್ಕು ಹಂಗಾಮು (ಪೂರ್ವ ಮುಂಗಾರು, ಮುಂಗಾರು, ಹಿಂಗಾರು ಹಾಗೂ ಬೇಸಿಗೆ ಹಂಗಾಮು) ಗಳಲ್ಲಿ ಬೆಳೆ ಸಮೀಕ್ಷೆ ಕಾರ್ಯವನ್ನು ಕೈಗೊಳ್ಳಲಾಗುತ್ತದೆ. ಬೆಳೆ ಸಮೀಕ್ಷೆಯನ್ನು (ಅ) ಸ್ವತಃ ರೈತರು (ಆ) ರೈತರ ಖಾಸಗಿ

ನಿವಾಸಿಗಳ ಸಹಾಯದೊಂದಿಗೆ ಮತ್ತು ಅ) ಮತ್ತು ಆ) ಸಾಧ್ಯವಾಗದಿದ್ದಲ್ಲಿ (ಇ) ಖಾಸಗಿ ನಿವಾಸಿಗಳು ಹಾಗೂ ಸರ್ಕಾರದ ಸಿಬ್ಬಂದಿಗಳನ್ನು ಬಳಸಿಕೊಂಡು ಕೈಗೊಳ್ಳಲಾಗುತ್ತದೆ. ಬೆಳೆ ಸಮೀಕ್ಷೆ ದತ್ತಾಂಶವನ್ನು ಬೆಳೆ ವಿಮೆ, ಕನಿಷ್ಠ ಬೆಂಬಲ ಬೆಲೆ ಯೋಜನೆ, NRDF/SRDF ಪರಿಹಾರ ವಿತರಣೆ, ಬ್ಯಾಂಕ್ ಮೂಲಕ ಸಾಲ ವಿತರಣೆ, ಬೆಳೆ ವಿವರಗಳನ್ನು RTC ಯಲ್ಲಿ ನಮೂದಿಸಲು, ಬೆಳೆ ಅಂಕಿ ಅಂಶಗಳನ್ನು ಕ್ರೋಢೀಕರಿಸಲು, ವಿವಿಧ ಇಲಾಖೆಯ ಯೋಜನೆಗಳಡಿ ಸೌಲಭ್ಯಗಳನ್ನು ವಿತರಿಸಲು, ಕೃಷಿ ಉತ್ಪಾದನೆ ಮತ್ತು ಉತ್ಪಾದಕತೆ ನಿರ್ಧರಿಸಲು ಮತ್ತು ಸರ್ಕಾರದ ಇನ್ನಿತರ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಬಳಸಿಕೊಳ್ಳಲಾಗುತ್ತದೆ.

**12. ಕೃಷಿ ಪ್ರಶಸ್ತಿ ಮತ್ತು ಕೃಷಿ ಪಂಡಿತ ಪ್ರಶಸ್ತಿ:**
ಕೃಷಿ ಪಂಡಿತ ಪ್ರಶಸ್ತಿ: ಕೃಷಿ ಕ್ಷೇತ್ರದಲ್ಲಿ ವಿನೂತನ ಅನ್ವೇಷಣೆ ಮತ್ತು ಸೃಜನಾತ್ಮಕ ಕಾರ್ಯಗಳಿಂದ ಗಮನಾರ್ಹ ಸಾಧನೆ ಮಾಡಿರುವ ಮತ್ತು ರೈತ ಸಮುದಾಯದ ಅಭಿವೃದ್ಧಿಗಾಗಿ ಕೊಡುಗೆ ನೀಡುತ್ತಿರುವ ರೈತ ಮತ್ತು ರೈತ ಮಹಿಳೆಯರಿಗೆ ಕೃಷಿ ಪಂಡಿತ ಪ್ರಶಸ್ತಿ ನೀಡಲಾಗುತ್ತಿದೆ. ಈ ಹಿಂದೆ ಕೃಷಿ ಪಂಡಿತ ಪ್ರಶಸ್ತಿ(ಪ್ರಥಮ/ ದ್ವಿತೀಯ/ ತೃತೀಯ/ ಉದಯೋನ್ಮುಖ) ಪಡೆದವರು ಹೊರತುಪಡಿಸಿ ಉಳಿದೆಲ್ಲಾ ರೈತ ಮತ್ತು ರೈತ ಮಹಿಳೆಯರು ಕೃಷಿ ಪಂಡಿತ ಪ್ರಶಸ್ತಿಗೆ ಸ್ಪರ್ಧಿಸಬಹುದಾಗಿರುತ್ತದೆ.
ಕೃಷಿ ಪ್ರಶಸ್ತಿ: ಕೃಷಿ ಕ್ಷೇತ್ರದಲ್ಲಿ ಉತ್ಪಾದನೆ ಮತ್ತು ಉತ್ಪಾದಕತೆಯನ್ನು ಹೆಚ್ಚಿಸಲು ರೈತರಲ್ಲಿ ಆರೋಗ್ಯಕರ ಸ್ಪರ್ಧಾ ಮನೋಭಾವನೆಯನ್ನು ಉಂಟು ಮಾಡಿ ಅತಿ ಹೆಚ್ಚು ಇಳುವರಿ ಪಡೆಯುವ ರೈತ ಮತ್ತು ರೈತ ಮಹಿಳೆಯರಿಗೆ ಕೃಷಿ ಪ್ರಶಸಿಯನ್ನು ನೀಡಲಾಗುತ್ತಿದೆ. ಕಳೆದ ಐದು ವರ್ಷಗಳಲ್ಲಿ ಬೆಳೆ ಸ್ಪರ್ಧೆಯಡಿ ವಿಜೇತರಾದವರನ್ನು ಹೊರತುಪಡಿಸಿ ಉಳಿದೆಲ್ಲಾ ರೈತರು ಕೃಷಿ ಪ್ರಶಸ್ತಿಗೆ ಸ್ಪರ್ಧಿಸಬಹುದಾಗಿರುತ್ತದೆ.

**13. ತರಬೇತಿ ಕಾರ್ಯಕ್ರಮಗಳು:** ಈ ಯೋಜನೆಯಡಿ ಕೃಷಿ ವಿಸ್ತರಣಾ ಅಧಿಕಾರಿಗಳ ನಿರ್ವಹಣಾ ಸಾಮರ್ಥ್ಯ ಮತ್ತು ರೈತರ/ ರೈತ ಮಹಿಳೆಯರ ವೃತ್ತಿ ಸಾಮರ್ಥ್ಯವನ್ನು ಹೆಚ್ಚಿಸಲು ಕೃಷಿ ತಾಂತ್ರಿಕತೆಗಳಿಗೆ ಸಂಬಂಧಿಸಿದಂತೆ ವಿಶೇಷ ತರಬೇತಿಗಳನ್ನು ಹಾಗೂ ಅಧ್ಯಯನ ಪ್ರವಾಸಗಳನ್ನು ಆಯೋಜಿಸಲಾಗುತ್ತದೆ.

**14. ಕೃಷಿ ಭಾಗ್ಯ:** ಕರ್ನಾಟಕ ರಾಜ್ಯದ ಮಳೆಯಾಶ್ರಿತ ಕೃಷಿಯನ್ನು ಜೀವನಾಧಾರಿತ ಕೃಷಿಯಿಂದ ಸುಸ್ಥಿರ ಕೃಷಿಯನ್ನಾಗಿ ರೂಪಾಂತರಗೊಳಿಸುವುದು; ಮಳೆ ನೀರನ್ನು ವ್ಯರ್ಥ ಮಾಡದೆ ಆಯ್ದ ಸ್ಥಳದಲ್ಲಿ ಕೃಷಿ ಹೊಂಡ ತೆಗೆದು ಜಲ ಸಂಗ್ರಹಿಸಿ, ಬೆಳೆಗಳ ಸಂದಿಗ್ಧ ಹಂತಗಳಲ್ಲಿ ರಕ್ಷಣಾತ್ಮಕ ನೀರಾವರಿ ಒದಗಿಸುವುದರೊಂದಿಗೆ ಸಮರ್ಪಕ ಮಳೆ ನೀರಿನ ಸಂಗ್ರಹಣೆ ಹಾಗೂ ಉಪಯುಕ್ತ ಬಳಕೆ ಪದ್ಧತಿಯಿಂದ ಕೃಷಿ ಉತ್ಪಾದಕತೆಯನ್ನು ಉತ್ತಮ ಪಡಿಸುವ ಹಾಗೂ ರೈತರ ಆದಾಯವನ್ನು ಹೆಚ್ಚಿಸುವ ಉದ್ದೇಶದೊಂದಿಗೆ ಮಳೆಯಾಶ್ರಿತ ಕೃಷಿ ನೀತಿ, 2014 ರನ್ವಯ 2023-24ನೇ ಸಾಲಿನಲ್ಲಿ ಕೃಷಿ ಭಾಗ್ಯ ಯೋಜನೆಯನ್ನು ಮರು ಜಾರಿಗೊಳಿಸಲಾಗಿರುತ್ತದೆ. ಪ್ರಸ್ತುತ ಸದರಿ ಯೋಜನೆಯನ್ನು ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳ ಎಲ್ಲಾ ತಾಲೂಕುಗಳಲ್ಲಿ ಪ್ಯಾಕೇಜ್ ಮಾದರಿಯಲ್ಲಿ ಅನುಷ್ಠಾನ ಮಾಡಲಾಗುತ್ತಿದೆ. ಫಲಾನುಭವಿ ರೈತರು ಯೋಜನೆಯ ಸಮಗ್ರ ಸದುಪಯೋಗ ಪಡೆಯಲು ಎಲ್ಲಾ ಘಟಕಗಳನ್ನು ಪ್ಯಾಕೇಜ್ ಮಾದರಿಯಲ್ಲಿ ಅಳವಡಿಸಬೇಕಿರುತ್ತದೆ.
**ಪ್ಯಾಕೇಜ್ ಘಟಕಗಳ ವಿವರ:** ಕ್ಷೇತ್ರ ಬದು ನಿರ್ಮಾಣ/ ನೀರು ಸಂಗ್ರಹಣಾ ರಚನೆ (ಕೃಷಿ ಹೊಂಡ)/ ನೀರು ಇಂಗದಂತೆ ತಡೆಯಲು ಪಾಲಿಥೀನ್ ಹೊದಿಕೆ (ಗರಿಷ್ಠ-ರೂ 50000)/ ಕೃಷಿ ಹೊಂಡದ ಸುತ್ತಲೂ ತಂತಿ ಬೇಲಿ (GI Wire Fencing)/ ಹೊಂಡದಿಂದ ನೀರು ಎತ್ತಲು ಡೀಸೆಲ್ /ಪೆಟ್ರೋಲ್/ಸೋಲಾರ್ ಪಂಪ್ ಸೆಟ್ (upto 10 HP)/ನೀರನ್ನು ಬೆಳೆಗೆ ಹಾಯಿಸಲು ಸೂಕ್ಷ್ಮ (ತುಂತುರು/ಹನಿ) ನೀರಾವರಿ-(PMRKVY-PDMC/ Atal Bhujal ಯೋಜನೆಯಡಿ).

**15. ರಾಷ್ಟ್ರೀಯ ಆಹಾರ ಭದ್ರತೆ ಮತ್ತು ಪೌಷ್ಠಿಕ ಅಭಿಯಾನ (ಕೃಷೋನ್ನತಿ ಯೋಜನೆ) NFSNM:** ಈ ಯೋಜನೆಯಡಿ ಭತ್ತ, ದ್ವಿದಳಧಾನ್ಯ, ಒರಟುಧಾನ್ಯ, ನ್ಯೂಟ್ರಿ ಸಿರಿಧಾನ್ಯ, ಕಬ್ಬು ಮತ್ತು ಹತ್ತಿ ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಭತ್ತ, ದ್ವಿದಳಧಾನ್ಯ, ಒರಟುಧಾನ್ಯ, ನ್ಯೂಟ್ರಿ ಸಿರಿಧಾನ್ಯ ಉತ್ಪಾದನೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು ಹಾಗೂ ಜಿಪ್ಸಂ/ ಕೃಷಿ ಸುಣ್ಣ ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೆ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ದ್ವಿದಳಧಾನ್ಯ ಬೆಳೆಗಳಿಗೆ ಪ್ರತಿ ಕ್ವಿಂಟಾಲಿಗೆ ರೂ.5000/- ಮತ್ತು ಸಿರಿಧಾನ್ಯಗಳಿಗೆ ರೂ.3000/- ಪ್ರೋತ್ಸಾಹಧನ ನೀಡಲಾಗುತ್ತದೆ.

**16. ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು (NMEO-OS):** ಖಾದ್ಯ ತೈಲಗಳನ್ನು ಆಮದು ಮಾಡಿಕೊಳ್ಳುವಲ್ಲಿ ದೇಶದ ಅವಲಂಬನೆಯನ್ನು ಕಡಿಮೆ ಮಾಡಲು ಮತ್ತು ದೇಶಿಯ ಎಣ್ಣೆಕಾಳುಗಳ ಉತ್ಪಾದನೆಯನ್ನು ಹೆಚ್ಚಿಸುವ ಹಾಗೂ ರೈತರ ಆದಾಯವನ್ನು ಸುಧಾರಿಸುವುದೊರೊಂದಿಗೆ ಆತ್ಮನಿರ್ಭರತೆಯನ್ನು ಸಾಧಿಸುವ ಉದ್ದೇಶದಿಂದ "ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು ಯೋಜನೆ" ಯನ್ನು ರಾಜ್ಯದಲ್ಲಿ ಅನುಷ್ಠಾಗೊಳಿಸಲಾಗುತ್ತಿದೆ. ಈ ಯೋಜನೆಯನ್ನು ಮೌಲ್ಯ ಸರಪಳಿ ಗುಚ್ಛಗಳು ಪ್ರಾತ್ಯಕ್ಷಿಕೆಗಳು, ಮಾಹಿತಿ, ಶಿಕ್ಷಣ ಮತ್ತು ಸಂವಹನ, ಅರಿವು ಮೂಡಿಸುವ ಕುರಿತು ತರಬೇತಿ ಮತ್ತು ಕಾರ್ಯಗಾರಗಳು, ಜೇನುಪೆಟ್ಟಿಗೆ ವಿತರಣೆ, ಪ್ರಾಥಮಿಕ ಮತ್ತು ದ್ವಿತೀಯ ಎಣ್ಣೆಕಾಳು

ಕೊಯ್ಲೋತ್ತರ ಮೂಲ ಸೌಕರ್ಯ ಸೌಲಭ್ಯ ಒದಗಿಸುವ ಘಟಕಗಳೊಂದಿಗೆ ಅನುಷ್ಠಾನಗೊಳಿಸಲಾಗುತ್ತದೆ.

17. **ಬೆಳೆ ವೈವಿಧ್ಯೀಕರಣ ಯೋಜನೆ (CDP):** ತಂಬಾಕು ಬೆಳೆಯುವ ಮುಖ್ಯ ಜಿಲ್ಲೆಗಳಾದ ಮೈಸೂರು, ಬೆಳಗಾವಿ ಮತ್ತು ಹಾಸನ ಜಿಲ್ಲೆಗಳಲ್ಲಿ ತಂಬಾಕು ಕೃಷಿಯ ಬದಲು ರೈತರನ್ನು ಕೃಷಿ ಮತ್ತು ತೋಟಗಾರಿಕೆಯ ಲಾಭದಾಯಕ ಪರ್ಯಾಯ ಬೆಳೆಗಳನ್ನು ಬೆಳೆಯಲು ಪ್ರೋತ್ಸಾಹಿಸುವುದರೊಂದಿಗೆ "ಸಮಗ್ರ ಕೃಷಿ ಪದ್ಧತಿ" ಮಾದರಿಯನ್ನು ಅಳವಡಿಸಲು ಪ್ರೇರೇಪಿಸಿ ರೈತನ ಆದಾಯ ಹೆಚ್ಚಳ ಮಾಡುವುದು ಮತ್ತು ತಂಬಾಕಿನಿಂದ ಆಗುವ ದುಷ್ಪರಿಣಾಮದ ಕುರಿತು ರೈತರಲ್ಲಿ ಅರಿವು ಮೂಡಿಸುವ ಉದ್ದೇಶದೊಂದಿಗೆ ಬೆಳೆ ಪದ್ಧತಿ ಆಧಾರಿತ ಪ್ರಾತ್ಯಕ್ಷಿಕೆಗಳು, ಸಮಗ್ರ ಕೃಷಿ ಪದ್ಧತಿ ಮಾದರಿಗಳ ಅನುಷ್ಠಾನಕ್ಕೆ ಸಹಾಯಧನ ನೀಡಲಾಗುತ್ತಿದೆ ಹಾಗೂ ಹಸಿರೆಲೆ ಗೊಬ್ಬರ ಬೀಜಗಳಿಗೆ ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ.

18. **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಸಮಗ್ರ ಕೃಷಿ ಪದ್ಧತಿಯ ವಿಸ್ತರಣೆ ಹಾಗೂ ಜನಪ್ರಿಯಗೊಳಿಸುವ ಕಾರ್ಯಕ್ರಮ (RKVY-IFS):** ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳಾದ ತೋಟಗಾರಿಕೆ ಹಾಗೂ ಪಶುಸಂಗೋಪನೆಗಳನ್ನು ಒಗ್ಗೂಡಿಸಿ "ಸಮಗ್ರ ಕೃಷಿ ಪದ್ಧತಿ "ಮೂಲಕ ರೈತನ ಆದಾಯ ಹೆಚ್ಚಳ ಮಾಡುವುದು ಹಾಗೂ ಅಳವಡಿಸಿದ ಪ್ರದೇಶದಲ್ಲಿ/ ಜಮೀನಿನಲ್ಲಿ ಬೆಳೆ ಉತ್ಪಾದಕತೆ, ಸುಸ್ಥಿರತೆ, ಸಮತೋಲನಾ ಆಹಾರ ಉತ್ಪಾದನೆ, ತ್ಯಾಜ್ಯಗಳ ಮರುಬಳಕೆ ಹಾಗೂ ವರ್ಷಪೂರ್ತಿ ಆದಾಯ ಹೆಚ್ಚಿಸುವ ಉದ್ದೇಶದಿಂದ ಸಮಗ್ರ ಕೃಷಿ ಪದ್ಧತಿ ಮಾದರಿಗಳ ಅನುಷ್ಠಾನಕ್ಕೆ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಒಟ್ಟಾರೆಯಾಗಿ 1600 ಸಮಗ್ರ ಕೃಷಿ ಪದ್ಧತಿ ಮಾದರಿಗಳನ್ನು ಅನುಷ್ಠಾನಗೊಳಿಸಲು ಕಾರ್ಯಕ್ರಮವನ್ನು ರೂಪಿಸಲಾಗಿದೆ.

19. **ಕರ್ನಾಟಕ ರೈತ ಸಮೃದ್ಧಿ ಯೋಜನೆ:** ಕೃಷಿ ಕ್ಷೇತ್ರವನ್ನು ಸುಸ್ಥಿರ ಹಾಗೂ ಲಾಭದಾಯಕವಾಗಿಸಲು ರಾಜ್ಯದ ಕೃಷಿ ಇಲಾಖೆಯಲ್ಲಿ ಪ್ರಸ್ತುತ ಅನುಷ್ಠಾನಗೊಳಿಸುತ್ತಿರುವ ಕೃಷಿ ಭಾಗ್ಯ ಯೋಜನೆಯ ಫಲಾನುಭವಿಗಳನ್ನು ಕೇಂದ್ರ ಬಿಂದುವಾಗಿರಿಸಿಕೊಂಡು ವಿವಿಧ ರೈತಪರ ಯೋಜನೆಗಳನ್ನು ಸಂಯೋಜಿಸುವ ಮೂಲಕ, ರೈತ ಮತ್ತು ರೈತ ಗುಂಪುಗಳಿಗೆ ಗುಣಮಟ್ಟದ ಉತ್ಪಾದನೆ, ಸಂಸ್ಕರಣೆ, ಮೌಲ್ಯವರ್ಧನೆ, ಮಾರುಕಟ್ಟೆ ಮತ್ತು ರಫ್ತು ಮಾಡುವುದರ ಬಗ್ಗೆ ಸಾಮರ್ಥ್ಯ ಅಭಿವೃದ್ಧಿ ಹಾಗೂ ಅರಿವು ಮೂಡಿಸುವುದು. ರೈತರಿಗೆ ಮಣ್ಣು ಪರೀಕ್ಷೆಯ ಆಧಾರದ ಮೇಲೆ ಯಾವ ಬೆಳೆ ಬೆಳೆಯುವುದು ಹಾಗೂ ಮಾರುಕಟ್ಟೆ ಬೇಡಿಕೆಯನ್ನು ಆಧರಿಸಿ ಮಾರ್ಗದರ್ಶನ ನೀಡುವುದು...ಇತ್ಯಾದಿಗಳ ಮೂಲಕ ಆಹಾರ ಉತ್ಪಾದನೆ ಹಾಗೂ ರೈತರ ಆದಾಯವನ್ನು ಹೆಚ್ಚಿಸುವುದು ಈ ಯೋಜನೆಯ ಉದ್ದೇಶವಾಗಿದೆ.

20. **ಎನ್.ಎಫ್.ಎಸ್.ಎನ್.ಎಂ – ಬೀಜ ಘಟಕಗಳು:** ಸರ್ಕಾರಿ ಸ್ವಾಮ್ಯದ ಸಂಸ್ಥೆಗಳ ಮೂಲಕ ರಾಜ್ಯದ ಬೀಜೋತ್ಪಾದನಾ ಕ್ಷೇತ್ರಗಳ, ಬೀಜ ಪರೀಕ್ಷಾ ಪ್ರಯೋಗಾಲಯಗಳ ಬಲವರ್ಧನೆ. ಬೀಜ ಪ್ರಮಾಣನ ಸಂಸ್ಥೆಗಳಿಗೆ ಬೆಂಬಲ, ಕೃಷಿ ವಿಶ್ವ ವಿದ್ಯಾಲಯಗಳಿಗೆ ಬೆಂಬಲ. ಪ್ರಮಾಣೀಕೃತ/ ಗುಣಮಟ್ಟದ ಬೀಜಗಳ ಉತ್ಪಾದನೆ ಹೆಚ್ಚಿಸುವುದು, ರೈತರು ಬೆಳೆದ ಬೀಜಗಳ ಗುಣಮಟ್ಟವನ್ನು ಉನ್ನತೀಕರಿಸುವುದು, ಬೀಜ ಉತ್ಪಾದನೆ, ಸಂಸ್ಕರಣೆ ಮತ್ತು ಪರೀಕ್ಷೆಯಲ್ಲಿ ಹೊಸ ತಂತ್ರಜ್ಞಾನಗಳ ಉತ್ತೇಜನ, ಬೀಜೋತ್ಪಾದನೆ, ಸಂಗ್ರಹಣೆ, ಪ್ರಮಾಣೀಕರಣ ಮತ್ತು ಗುಣಮಟ್ಟ ನಿಯಂತ್ರಣಕ್ಕಾಗಿ ಮೂಲ ಸೌಕರ್ಯಗಳನ್ನು ಬಲಪಡಿಸುವುದು ಮತ್ತು ಆಧುನೀಕರಿಸುವುದು ಈ ಯೋಜನೆಯ ಉದ್ದೇಶವಾಗಿದೆ.

21. **ಕೃಷಿ ವಿಸ್ತರಣೆ ಉಪ ಅಭಿಯಾನ (ATMA):** ವಿಸ್ತರಣಾ ಸುಧಾರಣೆಗಳಿಗಾಗಿ ರಾಜ್ಯ ವಿಸ್ತರಣಾ ಕಾರ್ಯಕ್ರಮಗಳಿಗೆ ಬೆಂಬಲ ಯೋಜನೆಯು ವಿಸ್ತರಣಾ ಪದ್ಧತಿಯನ್ನು ರೈತರೇ ಮುನ್ನಡೆಸುವ ಹಾಗೂ ರೈತರಿಗೆ ಉತ್ತರದಾಯಿತ್ವವಾಗಬೇಕಾದ ಯೋಜನೆಯಾಗುವ ಗುರಿಯನ್ನು ಹೊಂದಿದೆ. ಭಾಗವಹಿಸುವಿಕೆ ಆಧಾರದ ಮೇಲೆ ವಿಸ್ತರಣಾ ಸುಧಾರಣೆಗಳನ್ನು ಜಾರಿಗೆ ತರಲು ಮತ್ತು ರೈತರಿಗೆ ತಂತ್ರಜ್ಞಾನವನ್ನು ಹೊಸ ಸಾಂಸ್ಥಿಕ ವ್ಯವಸ್ಥೆ ಮೂಲಕ ಪ್ರಸರಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದಲ್ಲಿ ಕೃಷಿ ತಂತ್ರಜ್ಞಾನ ನಿರ್ವಹಣಾ ಸಂಸ್ಥೆ(ATMA)ಯನ್ನು ಅಸ್ತಿತ್ವಕ್ಕೆ ತರಲಾಗಿದೆ. ಈ ಯೋಜನೆಯಡಿಯಲ್ಲಿ ಭಾರತ ಸರ್ಕಾರ ನಿಗದಿಪಡಿಸಿರುವ ಮಾರ್ಗಸೂಚಿಯಂತೆ ಅಧಿಕಾರಿ/ ರೈತರ ತರಬೇತಿ, ಪರಿಚಯ ಪ್ರವಾಸ, ಪ್ರಾತ್ಯಕ್ಷಿಕೆ, ರೈತರ ಗುಂಪು ರಚನೆ, ಕೃಷಿ ಪಾಠಶಾಲೆ, ಕೃಷಿ ಮೇಳ, ಕ್ಷೇತ್ರೋತ್ಸವ ಇತ್ಯಾದಿ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ.

22. **ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ:** ರಾಜ್ಯದಲ್ಲಿ ಭಾರತ ಸರ್ಕಾರದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯನ್ನು ದಿನಾಂಕ 01.12.2018 ರಿಂದ ಅನ್ವಯ ವಾಗುವಂತೆ ಫೆಬ್ರುವರಿ 2019 ರಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಸಾಗುವಳಿ ಭೂಮಿ ಹೊಂದಿರುವ (01.02.2019 ರಳೊಳಗಾಗಿ ಸ್ವಾಧೀನದಲ್ಲಿರುವ /ಭೂದಾಖಲೆಯಲ್ಲಿ ಹೆಸರಿರುವ) ಎಲ್ಲಾ ಅರ್ಹ ರೈತ ಕುಟುಂಬಕ್ಕೆ (ಒಂದು ಕುಟುಂಬ ಎಂದರೆ ಗಂಡ, ಹೆಂಡತಿ ಮತ್ತು ಅಪ್ರಾಪ್ತ ಮಕ್ಕಳು) ಕೃಷಿ ಚಟುವಟಿಕೆಯಲ್ಲಿ ಉತ್ತಮ ಪರಿಕರಗಳನ್ನು ಬಳಸಿ ಬೆಳೆಗಳ ಆರೋಗ್ಯ ನಿರ್ವಹಣೆ ಹಾಗೂ ಹೆಚ್ಚಿನ ಇಳುವರಿ ಪಡೆದು

ನಿರೀಕ್ಷಿತ ಆದಾಯಗಳಿಸಲು ನೆರವಾಗಲು ವಾರ್ಷಿಕ ರೂ.6000/-ಗಳ ಆರ್ಥಿಕ ನೆರವನ್ನು ನೀಡಲಾಗುತ್ತಿದೆ. ಸದರಿ ಅನುದಾನವನ್ನು ರೂ.2000/-ಗಳಂತೆ ಮೂರು ಕಂತುಗಳಲ್ಲಿ ನಾಲ್ಕು ತಿಂಗಳಿಗೊಮ್ಮೆ ನೀಡಲಾಗುತ್ತದೆ.

23. **ಮಣ್ಣು ಆರೋಗ್ಯ ಮತ್ತು ಫಲವತ್ತತೆ ಯೋಜನೆ (ಆರ್.ಕೆ.ವಿ.ವೈ):** ಮಣ್ಣು ಮಾದರಿಗಳನ್ನು ಸಂಗ್ರಹಣೆ, ವಿಶ್ಲೇಷಣೆ ಮತ್ತು ಮಣ್ಣು ಆರೋಗ್ಯ ಚೀಟಿಗಳ ವಿತರಣೆ, ಇಲಾಖೆಯ ಮಣ್ಣು ಪರೀಕ್ಷಾ ಪ್ರಯೋಗಾಲಯಗಳ ಬಲವರ್ಧನೆ ಮತ್ತು NABL ಅಕ್ರಿಡಿಟೇಷನ್ ಕೈಗೊಳ್ಳಲಾಗುವುದು. ಜೈವಿಕ ಗೊಬ್ಬರ ಮತ್ತು ಸಾವಯವ ಗೊಬ್ಬರ ನಿಯಂತ್ರಣ ಪ್ರಯೋಗಾಲಯಗಳ ಬಲವರ್ಧನೆ, ರಸಗೊಬ್ಬರ ನಿಯಂತ್ರಣ ಪ್ರಯೋಗಾಲಯಗಳ & ಜೈವಿಕ ಗೊಬ್ಬರ ಮತ್ತು ಸಾವಯವ ಗೊಬ್ಬರ ನಿಯಂತ್ರಣ ಪ್ರಯೋಗಾಲಯಗಳ NABL ಅಕ್ರಿಡಿಟೇಷನ್ ಕೈಗೊಳ್ಳಲಾಗುವುದು. ಶಾಲಾ ಮಣ್ಣು ಆರೋಗ್ಯ ಕಾರ್ಯಕ್ರಮದಡಿ ಇಲಾಖೆಯ ಮಾರ್ಗದರ್ಶನದಡಿ ಶಾಲಾ ವಿದ್ಯಾರ್ಥಿಗಳ ಮೂಲಕ ಮಣ್ಣು ಮಾದರಿಗಳನ್ನು ಸಂಗ್ರಹಿಸಿ, ಶಾಲೆಯಲ್ಲಿ ಸ್ಥಾಪಿಸಲಾದ ಪ್ರಯೋಗಾಲಯಗಳಲ್ಲಿ ಪರೀಕ್ಷಿಸಿ ಸಿದ್ಧಪಡಿಸಿದ ಮಣ್ಣಿನ ಆರೋಗ್ಯ ಕಾರ್ಡ್‌ನಲ್ಲಿ ಶಿಫಾರಸ್ಸುಗಳನ್ವಯ ರೈತರಿಗೆ ಸೂಕ್ತ ರಸಗೊಬ್ಬರಗಳ ಬಳಕೆ ಕುರಿತು ತಿಳಿವಳಿಕೆಯನ್ನು ಮೂಡಿಸಲಾಗುತ್ತದೆ.

24. **ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ:** ಅಸಂಘಟಿತ ವಲಯದಲ್ಲಿರುವ ಸೂಕ್ಷ್ಮ/ ಕಿರು ಆಹಾರ ಸಂಸ್ಕರಣ ಉದ್ದಿಮೆಗಳನ್ನು ಪ್ರೋತ್ಸಾಹಿಸಿ ಅವುಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವುದು ಮತ್ತು ಅವುಗಳನ್ನು ಸಂಘಟಿತ ವಲಯಕ್ಕೆ ತರುವುದು ಹಾಗೂ ರೈತ ಉತ್ಪಾದಕ ಸಂಸ್ಥೆಗಳು, ಸ್ವಸಹಾಯ ಸಂಘಗಳು ಹಾಗೂ ಉತ್ಪಾದಕ ಸಹಕಾರಿ ಸಂಘಗಳಿಗೆ ಅವುಗಳ ಸರಪಳಿ ಕೊಂಡಿಯೊಂದಿಗೆ ಉತ್ತೇಜನ ನೀಡಲು ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಅನುದಾನವನ್ನು ನೀಡಲಾಗುತ್ತದೆ.

ವ್ಯಕ್ತಿಗತ ಕಿರು ಉದ್ದಿಮೆಗಳಿಗೆ ಬೆಂಬಲ, ರೈತ ಉತ್ಪಾದಕರ ಸಂಸ್ಥೆಗಳು/ ಉತ್ಪಾದಕ ಸೊಸೈಟಿಗಳಿಗೆ ಸಹಾಯಧನ, ಸ್ವಸಹಾಯ ಸಂಘಗಳ ಸದಸ್ಯರಿಗೆ ಕಾರ್ಯ ನಿರ್ವಹಣಾ ಬಂಡವಾಳ ಹಾಗೂ ಪರಿಕರಗಳ ಖರೀದಿಗೆ ಪ್ರಾಥಮಿಕ ಬಂಡವಾಳ, ಸಾಮಾನ್ಯ ಮೂಲಭೂತ ಸೌಕರ್ಯಕ್ಕೆ ಬೆಂಬಲ, ಬ್ರ್ಯಾಂಡಿಂಗ್ ಹಾಗೂ ಮಾರುಕಟ್ಟೆಗೆ ಬೆಂಬಲ, ರಾಜ್ಯದ ತಾಂತ್ರಿಕ ಸಂಸ್ಥೆಗಳಲ್ಲಿ ಆಹಾರ ಸಂಸ್ಕರಣಾ ಉದ್ಯಮಿಗಳಿಗೆ ತರಬೇತಿ ನೀಡಲು ಹಾಗೂ ಪ್ರಾಯೋಗಿಕ ಉತ್ಪಾದನೆ ಕೈಗೊಳ್ಳಲು ಇನ್ ಕ್ಯುಬೇಷನ್ ಕೇಂದ್ರಗಳ ಸ್ಥಾಪನೆಗೆ ಅನುದಾನವನ್ನು ನೀಡಲಾಗುತ್ತದೆ.

ಅಪರ ಕೃಷಿ ನಿರ್ದೇಶಕರು
(ಬೆಳೆ ಅಭಿವೃದ್ಧಿ & ಯೋಜನೆ)